# ಕರ್ನಾಟಕ ಸರ್ಕಾರ

ಸಂ.ವಇ 6 ಹೆಚ್‌ಎಹೆಚ್ 2010

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 11ನೇ ಆಗಸ್ಟ್ 2010.

## ಸು ತ್ತೋ ಲೆ

C-12987

ವಿಷಯ: ನಿವೇಶನ ರಚಿಸುವ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಸಂಪನ್ಮೂಲಗಳನ್ನು ಕ್ರೋಢೀಕರಿಸುವ ಬಗ್ಗೆ.

---

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿನ ನಿವೇಶನರಹಿತರಿಗೆ ವಸತಿ ಕಲ್ಪಿಸುವುದಕ್ಕಾಗಿ ವಿವಿಧ ನಿವೇಶನ ಯೋಜನೆಗಳಡಿಯಲ್ಲಿ ಲಭ್ಯವಿರುವ ಸರ್ಕಾರಿ ಜಮೀನು ಅಥವಾ ಖರೀದಿಸಲಾದ ಖಾಸಗಿ ಜಮೀನಿನಲ್ಲಿ ಫಲಾನುಭವಿಗಳಿಗೆ ನಿವೇಶನಗಳನ್ನು ಹಂಚಲು ಬಡಾವಣೆಗಳನ್ನು ರಚಿಸಲಾಗುತ್ತಿದೆ. ಈ ಬಡಾವಣೆಗಳಿಗೆ ಸಂಬಂಧಪಟ್ಟ ಪಂಚಾಯತ್ ರಾಜ್ ಸಂಸ್ಥೆಗಳಾಗಲೀ ಅಥವಾ ನಗರ ಸ್ಥಳೀಯ ಸಂಸ್ಥೆಗಳಾಗಲೀ ಮೂಲಭೂತ ಸೌಕರ್ಯಗಳಾದ ರಸ್ತೆ, ಒಳಚರಂಡಿ, ಕುಡಿಯುವ ನೀರು, ವಿದ್ಯುತ್ ಸೌಕರ್ಯ ಮುಂತಾದ ಅನುಕೂಲಗಳನ್ನು ಕಲ್ಪಿಸಬೇಕಾಗಿರುತ್ತದೆ. ಆದರೆ ಈ ಸಂಸ್ಥೆಗಳಲ್ಲಿ ಅನುದಾನದ ತೀವ್ರ ಕೊರತೆಯಿಂದಾಗಿ ಮೂಲಭೂತ ಸೌಕರ್ಯ ಒದಗಿಸಲು ಸಾಧ್ಯವಾಗುತ್ತಿಲ್ಲ. ನಗರ ಆಶ್ರಯ ಯೋಜನೆಯಡಿಯಲ್ಲಿ ಇತ್ತೀಚೆಗೆ ರಚಿಸಲಾದ ಕೆಲವು ಬಡಾವಣೆಗಳಲ್ಲಿ ನಿವೇಶನಗಳನ್ನು ಹಂಚಿ ಮನೆಗಳನ್ನು ನಿರ್ಮಿಸಲಾಗಿದೆ. ಆದರೂ ಅಲ್ಲಿ ಮೂಲಭೂತ ಸೌಕರ್ಯ ಇಲ್ಲದೇ ಇರುವುದರಿಂದ ಫಲಾನುಭವಿಗಳು ವಾಸ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಕಳೆದ ಎರಡು ವರ್ಷಗಳಲ್ಲಿ ಸರ್ಕಾರವು ಬಡಾವಣೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಅನುದಾನ ಬಿಡುಗಡೆ ಮಾಡಲಾಗಿದೆಯಾದರೂ, ಈ ಅನುದಾನವು ಕೇವಲ ಕುಡಿಯುವ ನೀರು ಹಾಗೂ ವಿದ್ಯುತ್ ಪೂರೈಕೆಗೆ ಮಾತ್ರ ಸಾಕಾಗುತ್ತಿದೆ. ಈ ಹಿನ್ನಲೆಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಈಗಾಗಲೇ ರಚಿಸಿದ ಬಡಾವಣೆಗಳಿಗೆ ಹಾಗೂ ಇನ್ನು ಮುಂದೆ ರಚಿಸಲಾಗುವ ಬಡಾವಣೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸಂಪನ್ಮೂಲ ಕ್ರೋಢೀಕರಿಸುವ ತೀವ್ರ ಅವಶ್ಯಕತೆ ಕಂಡುಬಂದಿರುತ್ತದೆ.

2. ದಿನಾಂಕ 6-7-2010ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಹಾಗೂ ಮಾನ್ಯ ವಸತಿ ಸಚಿವರ ಉಪಸ್ಥಿತಿಯಲ್ಲಿ ಬೆಳಗಾವಿ ಹಾಗೂ ಗುಲ್ಬರ್ಗಾ ವಿಭಾಗದ ಜಿಲ್ಲೆಗಳಲ್ಲಿ ವಿವಿಧ ವಸತಿ ಯೋಜನೆಗಳ ಪ್ರಗತಿ ಪರಿಶೀಲನೆ ಕುರಿತು ನಡೆದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಈ ವಿಷಯ ಚರ್ಚೆಗೊಂಡು ಬಡಾವಣೆಗಳಲ್ಲಿನ ಪ್ರಮುಖ ರಸ್ತೆ ಮತ್ತು ಮೂಲೆ ನಿವೇಶನಗಳನ್ನು ಹರಾಜು ಹಾಕಿ ಬಂದ ಹಣದಿಂದ ಜಮೀನು ಅಭಿವೃದ್ಧಿ ಪಡಿಸಬೇಕಾಗುತ್ತದೆಂದು ನಿರ್ಣಯಿಸಲಾಗಿರುತ್ತದೆ.

3. ನಗರ ಪ್ರದೇಶ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಇನ್ನು ಮುಂದೆ ಲಭ್ಯವಿರುವ ಸರ್ಕಾರಿ ಜಮೀನಿನಲ್ಲಿ ಮತ್ತು ಖರೀದಿಸಲಾದ ಖಾಸಗಿ ಜಮೀನಿನಲ್ಲಿ ನಿವೇಶನಗಳ ಹಂಚಿಕೆಗಾಗಿ ಬಡಾವಣೆ ರಚಿಸಲು ಕುಡಿಯುವ ನೀರು, ವಿದ್ಯುತ್ ಸೌಕರ್ಯ, ರಸ್ತೆ, ಒಳಚರಂಡಿ ಮುಂತಾದವುಗಳಿಗಾಗಿ ಸರ್ಕಾರದ ವಿವಿಧ ಯೋಜನೆಗಳಡಿ ನೀಡಿದ ಅನುದಾನವನ್ನು ಉಪಯೋಗಿಸಿಕೊಳ್ಳತಕ್ಕದ್ದು. ಒಂದು ವೇಳೆ, ಈ ಅನುದಾನ ಸಾಕಾಗದಿದ್ದ ಪಕ್ಷದಲ್ಲಿ, ಆ ಬಡಾವಣೆಗಳಲ್ಲಿನ ಮೂಲೆ ನಿವೇಶನಗಳು, ಮುಖ್ಯ ರಸ್ತೆಯ ಹಾಗೂ ಮಹತ್ವದ ಸ್ಥಳಗಳಲ್ಲಿನ ನಿವೇಶನಗಳನ್ನು ಕಾಯ್ದಿರಿಸಿ ತದನಂತರ ಜಿಲ್ಲಾಧಿಕಾರಿಗಳ ಅನುಮೋದನೆಯೊಂದಿಗೆ ಬಹಿರಂಗವಾಗಿ ಹರಾಜು ಮಾಡಿ ಅದರಿಂದ ಬರುವ ಅನುದಾನದಿಂದ ಯೋಗ್ಯ ರೀತಿಯಲ್ಲಿ ಕುಡಿಯುವ ನೀರಿನ ಪೂರೈಕೆ, ವಿದ್ಯುತ್ ಪೂರೈಕೆ, ಒಳಚರಂಡಿ ವ್ಯವಸ್ಥೆ, ರಸ್ತೆ ಸೌಲಭ್ಯ ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದೊಂದಿಗೆ ಸಮಾಲೋಚಿಸಿ ನಿಯಮಾವಳಿಗಳ ಮೇರೆಗೆ ಅವಶ್ಯ ಕ್ರಮಗಳನ್ನು ಕೈಗೊಳ್ಳಬಹುದಾಗಿರುತ್ತದೆ.

(ಜಿ.ಪಿ. ಕೊಂಗವಾಡ) 11.8
ಸರ್ಕಾರದ ಕಾರ್ಯದರ್ಶಿ,
ವಸತಿ ಇಲಾಖೆ.

N.S. 12-8-10

1. ಮಹಾಲೇಖಪಾಲರು (ಎ&ಇ), (ಲೆಕ್ಕಪತ್ರ, 1&2), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಬಂಡಿಪುರ್, ಕಾಲೋನಿ ಉಪನಗರ, ಬೆಂಗಳೂರು.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
4. ಎಲ್ಲಾ ಜಿಲ್ಲಾಧಿಕಾರಿಗಳು
5. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,
6. ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, (ವೆಚ್ಚ 3-9) ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
10. ಹೆಚ್ಚುವರಿ ಪ್ರತಿಗಳು/ ರಕ್ಷಾಕಡತ.

ರಾ.ಗಾಂ.ಗ್ರಾ.ವ.ನಿ.ನಿ.
ಬೆಂಗಳೂರು.
16 AUG 2010